**Bangalore**
**Regional News**
**30.05.2026 / 18.40 hrs**
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

೧. ಕರ್ನಾಟಕ ಕಾಂಗ್ರೆಸ್ ಶಾಸಕಾಂಗ ಪಕ್ಷದ ನಾಯಕರಾಗಿ ಡಿ.ಕೆ.ಶಿವಕುಮಾರ್ ಸರ್ವಾನುಮತದಿಂದ ಆಯ್ಕೆ

೨. ಜೂನ್ ೩ರಂದು ಲೋಕಭವನದ ಗಾಜಿನ ಮನೆಯಲ್ಲಿ ನೂತನ ಮುಖ್ಯಮಂತ್ರಿ ಪ್ರಮಾಣವಚನ

೩. ಬೆಂಗಳೂರು ಘನತ್ಯಾಜ್ಯ ಟೆಂಡರ್ ಅಕ್ರಮಗಳ ಕುರಿತು ತುರ್ತು ತನಿಖೆಗೆ ಸರ್ಕಾರದ ಮುಖ್ಯ ಕಾರ್ಯದರ್ಶಿಗೆ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಪತ್ರ

೪. ನಾಳೆ ಮನ್ ಕಿ ಬಾತ್ ; ಪ್ರಧಾನಿ ನರೇಂದ್ರ ಮೋದಿ ಭಾರತೀಯರನ್ನುದ್ದೇಶಿಸಿ ಮನದ ಮಾತು

**<><*<><>*><>**

ಕರ್ನಾಟಕ ಕಾಂಗ್ರೆಸ್ ಶಾಸಕಾಂಗ ಪಕ್ಷದ ನೂತನ ನಾಯಕರಾಗಿ ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಆಯ್ಕೆಯಾಗಿದ್ದಾರೆ. ಇಂದು ಸಂಜೆ ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ನಡೆದ ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆಯಲ್ಲಿ ಡಿ.ಕೆ. ಶಿವಕುಮಾರ್ ಅವರನ್ನು ಆಯ್ಕೆ ಮಾಡಲಾಗಿದೆ. ಹಂಗಾಮಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆ ನಡೆಯಿತು. ಸಭೆಯಲ್ಲಿ ಸಿದ್ದರಾಮಯ್ಯ ಅವರು, ಡಿ.ಕೆ. ಶಿವಕುಮಾರ್ ಮುಂದಿನ ಶಾಸಕಾಂಗ ಪಕ್ಷದ ನಾಯಕರಾಗಲಿ ಎಂಬ ಪ್ರಸ್ತಾವವನ್ನು ಡಾ. ಜಿ. ಪರಮೇಶ್ವರ್ ಅನುಮೋದಿಸಿದರು. ಇದಕ್ಕೆ ಎಲ್ಲಾ ಶಾಸಕರು ಒಮ್ಮತ ಸೂಚಿಸಿದರು. ಬಳಿಕ ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ.ವೇಣುಗೋಪಾಲ್, ಕಾಂಗ್ರೆಸ್ ಶಾಸಕಾಂಗ ಪಕ್ಷದ ನೂತನ ನಾಯಕರಾಗಿ ಡಿ.ಕೆ. ಶಿವಕುಮಾರ್ ಆಯ್ಕೆಯಾಗಿದ್ದಾರೆ ಎಂದು ಘೋಷಿಸಿದರು. ಸಭೆಯಲ್ಲಿ ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೇವಾಲ, ವಿಧಾನಪರಿಷತ್ ಸಭಾ ನಾಯಕ ಎನ್.ಎಸ್.ಬೋಸರಾಜು ಸೇರಿದಂತೆ ಕಾಂಗ್ರೆಸ್‌ನ ಎಲ್ಲಾ ಶಾಸಕರು ಭಾಗವಹಿಸಿದರು.

<><*<><>*><>

ಗಾಜಿನ ಮನೆಯಲ್ಲಿ ನಡೆಯಲಿರುವ ನೂತನ ಮುಖ್ಯಮಂತ್ರಿಗಳ ಪ್ರಮಾಣ ವಚನ ಕಾರ್ಯಕ್ರಮವನ್ನು ಜನಸಾಮಾನ್ಯರಿಗೆ ಯಾವುದೇ ತೊಂದರೆ ಉಂಟಾಗದಂತೆ ಸರಳವಾಗಿ ಆಚರಿಸಲು ಕಾಂಗ್ರೆಸ್ ಪಕ್ಷ ನಿರ್ಧರಿಸಿದೆ ಎಂದು ಕೆಪಿಸಿಸಿ ಕಾರ್ಯಾಧ್ಯಕ್ಷ ಜಿ.ಸಿ.ಚಂದ್ರಶೇಖರ್ ಸುದ್ದಿಗೋಷ್ಠಿಯಲ್ಲಿಂದು ತಿಳಿಸಿದ್ದಾರೆ. ಬೆಂಗಳೂರಿನ ನಾಗರಿಕರ ದೈನಂದಿನ ಚಟುವಟಿಕೆಗಳಿಗೆ ಅಡಚಣೆಯಾಗದಂತೆ ಹಾಗೂ ಹೊರ ಜಿಲ್ಲೆಗಳಿಂದ ಬರುವ ಕಾರ್ಯಕರ್ತರು ಅನಗತ್ಯವಾಗಿ ಪ್ರಯಾಣ ಮಾಡದಂತೆ ಈ ತೀರ್ಮಾನ ಕೈಗೊಳ್ಳಲಾಗಿದೆ. ಹಾಗಾಗಿ ಕಾರ್ಯಕರ್ತರು, ಅಭಿಮಾನಿಗಳು ಬೆಂಗಳೂರಿಗೆ ಆಗಮಿಸಬಾರದು. ನೂತನ ಮುಖ್ಯಮಂತ್ರಿಗಳು ಮುಂದಿನ ದಿನಗಳಲ್ಲಿ ರಾಜ್ಯದಾದ್ಯಂತ ಪ್ರವಾಸ ಕೈಗೊಂಡು ಜನರ ಆಶೀರ್ವಾದ ಪಡೆಯಲಿದ್ದಾರೆ ಎಂದು ಹೇಳಿದ್ದಾರೆ.

<><*<><>*><>

ರಾಜ್ಯದಲ್ಲಿ ಮುಖ್ಯಮಂತ್ರಿ ಬದಲಾದರೂ ಕಾಂಗ್ರೆಸ್ ಪಕ್ಷ ಕೊಟ್ಟ ಮಾತಿನಂತೆ ಪಂಚ ಗ್ಯಾರಂಟಿ ಯೋಜನೆಗಳನ್ನು ಮುಂದುವರೆಸಲಿದೆ ಎಂದು ಗ್ಯಾರಂಟಿ ಸಮಿತಿಗಳ ಪ್ರಾಧಿಕಾರದ ಕೋಲಾರ ತಾಲೂಕು ಅಧ್ಯಕ್ಷ ವೇಮಗಲ್ ವಿ.ಎಂ ಮುನಿಯಪ್ಪ ಹೇಳಿದ್ದಾರೆ. ಕೋಲಾರದಲ್ಲಿ ತಾಲ್ಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ವಿರೋಧಿಗಳ ಅಪಪ್ರಚಾರಕ್ಕೆ ಕಿವಿಕೊಡದೆ ಗ್ಯಾರಂಟಿ ಯೋಜನೆಗಳ ಸವಲತ್ತುಗಳನ್ನು ನೈಜ ಫಲಾನುಭವಿಗಳಿಗೆ ತಲುಪಿಸುವ ನಿಟ್ಟಿನಲ್ಲಿ ಅಧಿಕಾರಿಗಳು ಮತ್ತಷ್ಟು ದಕ್ಷತೆ ಹಾಗೂ ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದು ಸಲಹೆ ನೀಡಿದ್ದಾರೆ.

<><*<><>*><>

ದೇಶದ ಪ್ರಜಾಪ್ರಭುತ್ವ ವ್ಯವಸ್ಥೆ ಮತ್ತು ಸಂವಿಧಾನಾತ್ಮಕ ಮೌಲ್ಯಗಳ ಬಲವರ್ಧನೆಯಲ್ಲಿ ವಕೀಲರ ಪಾತ್ರ ಅತ್ಯಂತ ಮಹತ್ವದ್ದಾಗಿದೆ ಎಂದು ಕರ್ನಾಟಕ ಉಪಲೋಕಾಯುಕ್ತ ನ್ಯಾಯಮೂರ್ತಿ ಕೆ.ಎನ್. ಫಣೀಂದ್ರ ಅಭಿಪ್ರಾಯಪಟ್ಟರು. ಯಾದಗಿರಿಯ ಜಿಲ್ಲಾ ನ್ಯಾಯಾಲಯ ಸಭಾಂಗಣದಲ್ಲಿ ಇಂದು ಆಯೋಜಿಸಿದ್ದ ನ್ಯಾಯಾಂಗ ಅಧಿಕಾರಿಗಳು ಹಾಗೂ ವಕೀಲರ ಸಂವಾದ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಸಂವಿಧಾನವು ಪ್ರತಿಯೊಬ್ಬ ನಾಗರಿಕನಿಗೂ ಸಮಾನ ಹಕ್ಕು ಮತ್ತು ಅವಕಾಶಗಳನ್ನು ಕಲ್ಪಿಸಿದ್ದು, ಅದರ ಆಶಯಗಳನ್ನು ಸಮಾಜದ ಕಟ್ಟಕಡೆಯ ವ್ಯಕ್ತಿಗೆ ತಲುಪಿಸುವ ಜವಾಬ್ದಾರಿ ಕಾನೂನು ವಲಯದ ಮೇಲಿದೆ ಎಂದರು. ಜಿಲ್ಲಾ ಪ್ರಧಾನ ಮತ್ತು ಸತ್ರ ನ್ಯಾಯಾಧೀಶ

ಮರುಳಸಿದ್ಧಾರಾಧ್ಯ, ಉಪಲೋಕಾಯುಕ್ತರು ಜಿಲ್ಲೆಯಲ್ಲಿ ನಡೆಸುತ್ತಿರುವ ಜನಜಾಗೃತಿ ಕಾರ್ಯಕ್ರಮಗಳು ಆಡಳಿತ ವ್ಯವಸ್ಥೆ ಹಾಗೂ ಸಾರ್ವಜನಿಕರಲ್ಲಿ ಕಾನೂನು ಅರಿವು ಹೆಚ್ಚಿಸಲು ಸಹಕಾರಿಯಾಗಿವೆ ಎಂದು ತಿಳಿಸಿದರು.

**<><*<><>*><>**

ರೈತರು ಹಾಗೂ ತಳ ಸಮುದಾಯದ ಮಾಜಿ ಸಚಿವ ವೆಂಕಟರಮಣಪ್ಪ ಅವರು ನಿಧನರಾಗಿದ್ದಾರೆ. ನಾಲ್ಕು ಬಾರಿ ಶಾಸಕರಾಗಿ, ಎರಡು ಬಾರಿ ಸಚಿವರಾಗಿ ಸೇವೆ ಸಲ್ಲಿಸಿ, ಅಹಿಂದ ವರ್ಗದ ಪರವಾಗಿದ್ದ ವೆಂಕಟರಮಣಪ್ಪ ಅವರ ನಿಧನದಿಂದ ರಾಜ್ಯಕ್ಕೆ ನಷ್ಟವಾಗಿದೆ ಎಂದು ಹಂಗಾಮಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅಭಿಪ್ರಾಯಪಟ್ಟರು. ಇಂದು ಪಾವಗಡದಲ್ಲಿ ಮಾಜಿ ಸಚಿವ ವೆಂಕಟರಮಣಪ್ಪ ಅವರ ಪಾರ್ಥಿವ ಶರೀರದ ದರ್ಶನ ಪಡೆದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅಹಿಂದ ವರ್ಗದ ಧ್ವನಿಯಾಗಿದ್ದ ಅವರು ಸಮಾಜದ ತಳಸಮುದಾಯದವರ ಬಗ್ಗೆ ಅಪಾರ ಕಾಳಜಿ ಹೊಂದಿದ್ದು, ಸಾಮಾಜಿಕ ನ್ಯಾಯಕ್ಕೆ ಬದ್ಧರಾಗಿದ್ದರು. ಸ್ವತ: ರೈತರಾಗಿದ್ದ ವೆಂಕಟರಮಣಪ್ಪರು, ರೈತರ ಏಳಿಗೆಗೆ ಬಹುವಾಗಿ ಶ್ರಮಿಸಿದ್ದರು ಎಂದು ಸ್ಮರಿಸಿದರು.

**<><*<><>*><>**

ಬೆಂಗಳೂರು ಸಮಗ್ರ ಘನತ್ಯಾಜ್ಯ ನಿರ್ವಹಣಾ ಟೆಂಡರ್ ಪ್ರಕ್ರಿಯೆಯಲ್ಲಿ ಸುಮಾರು ೩೯ ಸಾವಿರದ ೪೩೭ ಕೋಟಿ ಸಾರ್ವಜನಿಕ ವೆಚ್ಚವನ್ನು ಒಳಗೊಂಡ ಗಂಭೀರ ಅಕ್ರಮಗಳ ಆರೋಪಗಳ ಹಿನ್ನೆಲೆ, ಕೇಂದ್ರ ಅತಿಸಣ್ಣ, ಸಣ್ಣ ಮತ್ತು ಮಧ್ಯಮ ಕೈಗಾರಿಕೆ ಖಾತೆ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿಗೆ ತೀವ್ರ ಆತಂಕ ವ್ಯಕ್ತಪಡಿಸಿ ಪತ್ರ ಬರೆದಿದ್ದಾರೆ. ತಮ್ಮ ಪತ್ರದಲ್ಲಿ ಸಚಿವರು ಟೆಂಡರ್ ಪ್ರಕ್ರಿಯೆಯಲ್ಲಿ ನಡೆದಿರುವ ಗಂಭೀರ ಪ್ರಕ್ರಿಯಾತ್ಮಕ ಲೋಪಗಳು, ಹಣಕಾಸು ಅಕ್ರಮಗಳು, ಕಾನೂನು ಉಲ್ಲಂಘನೆಗಳು ಹಾಗೂ ಆಡಳಿತಾತ್ಮಕ ಪಕ್ಷಪಾತದ ಬಗ್ಗೆ ಉಲ್ಲೇಖಿಸಿದ್ದಾರೆ. ವಿಶೇಷವಾಗಿ ಹಣಕಾಸು ಇಲಾಖೆಯ ಸ್ಪಷ್ಟ ಆಕ್ಷೇಪಣೆ ಮತ್ತು ತಿರಸ್ಕಾರವಿದ್ದರೂ ಪ್ರಸ್ತಾವನೆಯನ್ನು ಮುಂದಕ್ಕೆ ತೆಗೆದುಕೊಂಡು ಅನುಮೋದಿಸಿರುವುದು ಪಾರದರ್ಶಕತೆ ಮತ್ತು ಕಾನೂನುಬದ್ಧತೆಯ ಬಗ್ಗೆ ಗಂಭೀರ ಪ್ರಶ್ನೆಗಳನ್ನು ಉದ್ಭಾವಿಸಿದೆ ಎಂದು ಅವರು ತಿಳಿಸಿದ್ದಾರೆ.

**<><*<><>*><>**

ಕೇಂದ್ರ ರೈಲ್ವೆ ಮತ್ತು ಜಲಶಕ್ತಿ ರಾಜ್ಯ ಸಚಿವ ವಿ.ಸೋಮಣ್ಣ ಅವರು ಜೂನ್ ೧ರಂದು ಸೋಮವಾರ ತುಮಕೂರು ಜಿಲ್ಲೆಯ ಗುಬ್ಬಿಯಲ್ಲಿ ರೈಲ್ವೆ ಕೆಳಸೇತುವೆ ಕಾಮಗಾರಿಗೆ ಚಾಲನೆ ನೀಡಲಿದ್ದಾರೆ. ಗುಬ್ಬಿಯಲ್ಲಿ ಲೆವೆಲ್ ಕ್ರಾಸಿಂಗ್ ಗೇಟ್ ಸಂಖ್ಯೆ ೪ಲರ ಬದಲಿಗೆ ಕಳ್ಳಿಪಾಳ್ಯ ಗೇಟ್ ರಸ್ತೆ ಕೇಳಸೇತುವೆ ನಿರ್ಮಾಣಕ್ಕೆ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ ಎಂದು ನೈಋತ್ಯ ರೈಲ್ವೆ ವಲಯ ಪ್ರಕಟಣೆಯಲ್ಲಿ ತಿಳಿಸಿದೆ.

<><*<><>*><>

ಆಕಾಶವಾಣಿಯ ಜನಪ್ರಿಯ ಮಾಸಿಕ ಕಾರ್ಯಕ್ರಮ 'ಮನ್ ಕಿ ಬಾತ್'ನಲ್ಲಿ  ನಾಳೆ ಬೆಳಗ್ಗೆ ೧೧ ಗಂಟೆಗೆ ಪ್ರಧಾನಿ ನರೇಂದ್ರ ಮೋದಿ ಅವರು, ದೇಶ ವಿದೇಶಗಳಲ್ಲಿರುವ ಭಾರತೀಯರನ್ನುದ್ದೇಶಿಸಿ ತಮ್ಮ ಮನದ ಮಾತನ್ನು ಹಂಚಿಕೊಳ್ಳಲಿದ್ದಾರೆ. ಇದು ಮನ್ ಕಿ ಬಾತ್‌ನ ೧೩೪ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲಾ ವಾಹಿನಿಗಳು, ಆಕಾಶವಾಣಿ ಸುದ್ದಿ ಜಾಲತಾಣ ಮತ್ತು ನ್ಯೂಸ್ ಆನ್ ಏರ್ ಮೊಬೈಲ್ ಅಪ್ಲಿಕೇಶನ್‌ನಲ್ಲಿ ಪ್ರಸಾರವಾಗಲಿದೆ. ಈ ಕಾರ್ಯಕ್ರಮ ಆಕಾಶವಾಣಿ, ಡಿಡಿ ನ್ಯೂಸ್, ಪ್ರಧಾನಮಂತ್ರಿ ಕಚೇರಿ ಹಾಗೂ ವಾರ್ತಾ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ವಾಹಿನಿಗಳಲ್ಲಿಯೂ ನೇರ ಪ್ರಸಾರ ಮಾಡಲಾಗುತ್ತದೆ. ಹಿಂದಿ ಪ್ರಸಾರದ ನಂತರ ಪ್ರಾದೇಶಿಕ ಭಾಷೆಗಳಲ್ಲಿ ಕಾರ್ಯಕ್ರಮ ಬಿತ್ತರಗೊಳ್ಳಲಿದೆ.

<><*<><>*><>

ಅಗ್ನಿಪಥ ಯೋಜನೆಯಡಿಯಲ್ಲಿ ಬೆಳಗಾವಿಯ ಮರಾಠಾ ಲೈಟ್ ಇನ್‌ಫೆಂಟ್ರಿ ರೆಜಿಮೆಂಟಲ್ ಕೇಂದ್ರ ಒಐlಖಅ ಯಲ್ಲಿ ಕಳೆದ ೨೪ ವಾರಗಳಿಂದ ಸೈನಿಕ ತರಬೇತಿ ಪಡೆದ ೭ ತಂಡದ ೭೬೫ ಅಗ್ನಿವೀರ ಪ್ರಶಿಕ್ಷಣಾರ್ಥಿಗಳ ಆಕರ್ಷಕ ನಿರ್ಗಮನ ಪಥ ಸಂಚನ ಇಂದು ಜರುಗಿತು.  ಸೈನಿಕ ವಿಧ್ಯುಕ್ತ ಪೂರ್ಣ ಸಂಪ್ರದಾಯಗಳೊಂದಿಗೆ ಕಾರ್ಯಕ್ರಮದಲ್ಲಿ ಪಾಲ್ಗೊಂಡ ಮರಾಠಾ ಲೈಟ್ ಇನ್‌ಫೆಂಟ್ರಿ ರೆಜಿಮೆಂಟಲ್ ಸೆಂಟರ್‌ನ ಕಮಾಂಡೆಂಟ್ ಬ್ರಿಗೇಡಿಯರ್ ಗಿರೀಶ್ ಉಪಾಧ್ಯ ಅವರು ಗೌರವ ವಂದನೆ ಸ್ವೀಕರಿಸಿ, ಅಗ್ನವೀರ ಪ್ರಶಿಕ್ಷಣಾರ್ಥಿಗಳ ಪರೇಡ್ ವೀಕ್ಷಿಸಿ ಪ್ರಮಾಣೀಕರಿಸಿದರು ಅಗ್ನಿವೀರ್ ಸಂಕೇತ್ ಸಿಂಗ್ ಪರೇಡ್‌ನ  ನೇತೃತ್ವ ವಹಿಸಿದ್ದರು. ಮೇಜರ್ ಗಜಾನನ್ ಪಾಟೀಲ್ ಪೆರೇಡ್ ಆಡಳಿತ ಅಧಿಕಾರಿಯಾಗಿ ಪಾಲ್ಗೊಂಡಿದ್ದರು.  ಅಗ್ನಿವೀರರು ನಮ್ಮ ರಾಷ್ಟ್ರಧ್ವಜ, ರೆಜಿಮೆಂಟಲ್ ಧ್ವಜ ಮತ್ತು ಧಾರ್ಮಿಕ ಪವಿತ್ರ ಪುಸ್ತಕಗಳ ಸಮ್ಮುಖದಲ್ಲಿ 'ಪ್ರಮಾಣವಚನ' ಸ್ವೀಕರಿಸಿದರು.

<><*<><>*><>

’ಸರ್ವರಿಗೂ ಸೂರು’  ಎನ್ನುವ ಧ್ಯೇಯ - ಉದ್ದೇಶದೊಂದಿಗೆ ಆರಂಭವಾದ ಪ್ರಧಾನಮಂತ್ರಿ ಆವಾಸ್ ಯೋಜನೆಯು ವಿಜಯಪುರ ಜಿಲ್ಲೆಯಲ್ಲಿ ಸಮರ್ಪಕವಾಗಿ ಅನುಷ್ಠಾನಗೊಳ್ಳುತ್ತಿದೆ ಎಂದು ಜಿಲ್ಲಾ ಪಂಚಾಯತಿಯ ಮುಖ್ಯ ಯೋಜನಾಧಿಕಾರಿ ಚಂದ್ರಕಾಂತ ಕುಂಬಾರ ತಿಳಿಸಿದ್ದಾರೆ. ಆಕಾಶವಾಣಿ ಯೊಂದಿಗೆ ಮಾತನಾಡಿದ ಅವರು, ೨೦೨೪-೨೫ರ ಸಾಲಿನಲ್ಲಿ ವಿಜಯಪುರ ಜಿಲ್ಲೆಗೆ ೫೧ ಸಾವಿರ ೫೨೧ ಮನೆಗಳ ಗುರಿ ನೀಡಲಾಗಿದೆ, ಅದರಲ್ಲಿ ೨೮ ಸಾವಿರ ೫೫ ಮನೆಗಳನ್ನು ಮಂಜೂರು ಮಾಡಲಾಗಿದೆ ಎಂದು ಹೇಳಿದ್ದಾರೆ.

<><*<><>*><>

ಮೈಸೂರು ಯೋಗ ಫೆಡರೇಷನ್ ವತಿಯಿಂದ ೧೧ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಅಂಗವಾಗಿ ನಾಳೆ  ನಗರದ ಅರಮನೆ ಆವರಣದಲ್ಲಿ ಯೋಗಾಭ್ಯಾಸ ಹಾಗೂ ಮಹಾ ಸಂಕಲ್ಪ ದಿವಸ್ ಆಯೋಜಿಸಲಾಗಿದೆ ಎಂದು ಜಿಎಸ್‌ಎಸ್ ಸಮೂಹ ಸಂಸ್ಥೆಗಳ ಮುಖ್ಯಸ್ಥ ಡಿ.ಶ್ರೀಹರಿ ದ್ವಾರಕನಾಥ್ ತಿಳಿಸಿದ್ದಾರೆ. ನಾಳೆ ಬೆಳಗ್ಗೆ ೫.೩೦ಕ್ಕೆ ಕಾರ್ಯಕ್ರಮ ಆರಂಭವಾಗಲಿದ್ದು, ಸುಮಾರು ಸಾವಿರ ಮಂದಿ ಯೋಗಾಸಕ್ತರು ಪಾಲ್ಗೊಳ್ಳುವರು. ಇದೇ ವೇಳೆ ನಗರದ ವಿವಿಧ ಅಪಾರ್ಟ್‌ಮೆಂಟ್, ಶಾಲಾ ಕಾಲೇಜು, ಉದ್ಯಾನಗಳು ಸೇರಿದಂತೆ ೧೨೦ ಕೇಂದ್ರಗಳಲ್ಲಿ ಸುಮಾರು ೧ ಲಕ್ಷದ ೨೦ ಸಾವಿರ ಮಂದಿ ಯೋಗಾಸನದಲ್ಲಿ ಪಾಲ್ಗೊಳ್ಳಲಿದ್ದಾರೆ. ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ನೇತೃತ್ವ ವಹಿಸಲಿದ್ದಾರೆ ಎಂದು  ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿದ್ದಾರೆ.

<><*<><>*><>

ವಿಶ್ವ ತಂಬಾಕು ವಿರೋಧಿ ದಿನಾಚರಣೆ ಅಂಗವಾಗಿ ಚಾಮರಾಜನಗರದಲ್ಲಿ ವಾಕಥಾನ್ ಯಶಸ್ವಿಯಾಗಿ ನಡೆಯಿತು. ವಿವಿಧ ಸಂಘ-ಸಂಸ್ಥೆಗಳ ಸಂಯುಕ್ತ ಆಶ್ರಯದಲ್ಲಿ ಚಾಮರಾಜನಗರದ ಚಾಮರಾಜೇಶ್ವರ ದೇವಸ್ಥಾನದಿಂದ ಜಿಲ್ಲಾಡಳಿತ ಭವನದವರೆಗೆ ನೂರಾರು ಮಂದಿ ತಂಬಾಕು ಮುಕ್ತ ಸಮಾಜ ನಿರ್ಮಾಣಕ್ಕಾಗಿ ವಾಕಥಾನ್ ನಡೆಸಿದರು.  ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಮೋನಾರೋತ್  ವಾಕಥಾನ್‌ಗೆ ಚಾಲನೆ ನೀಡಿ ಮಾತನಾಡಿ, ತಂಬಾಕು ಮುಕ್ತ ಸ್ವಸ್ಥ ಸಮಾಜ ಹಾಗೂ ಆರೋಗ್ಯವಂತ ಭಾರತವನ್ನು ರೂಪಿಸುವಲ್ಲಿ ಯುವ ಜನಾಂಗ, ಸಾರ್ವಜನಿಕರು ಕೈಜೋಡಿಸಬೇಕು ಎಂದು ಹೇಳಿದರು.

<><*<><>*><>

<u>ಸಂಕ್ಷಿಪ್ತ ಸುದ್ದಿಗಳು...</u>

೧. ಜೂನ್ ೧ರ ವಿಶ್ವ ಹಾಲು ದಿನಾಚರಣೆ ಪ್ರಯುಕ್ತ ಅಂದು ಚಿಕ್ಕಬಳ್ಳಾಪುರ ಜಿಲ್ಲಾ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ ಚಿಮುಲ್ ವತಿಯಿಂದ ಚಿಕ್ಕಬಳ್ಳಾಪುರ ನಗರದಲ್ಲಿನ ತಾಯಿ ಮತ್ತು ಮಕ್ಕಳ ಆಸ್ಪತ್ರೆಯ ಒಳರೋಗಿಗಳಿಗೆ ಗುಡ್ ಲೈಫ್ ಹಾಲನ್ನು ವಿತರಿಸುವ ಜೊತೆಗೆ ಹಾಲಿನ ಪ್ರಾಮುಖ್ಯತೆ, ಮಹತ್ವ ಮತ್ತು ಪ್ರಯೋಜನಗಳ ಕುರಿತು ಅರಿವು ಮೂಡಿಸುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಚಿಮುಲ್ ವ್ಯವಸ್ಥಾಪಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

೨. ಭಾರತೀಯ ಜನತಾ ಪಕ್ಷವು ವಿಶ್ವದಲ್ಲೇ ಅತಿ ಹೆಚ್ಚು ಸದಸ್ಯರನ್ನು ಹೊಂದಿರುವ ರಾಜಕೀಯ ಸಂಘಟನೆಯಾಗಿದ್ದು, ರಾಷ್ಟ್ರಸೇವೆ ಮತ್ತು ಸಮಾಜ ಪರಿವರ್ತನೆಯ ಧ್ಯೇಯದೊಂದಿಗೆ ಕಾರ್ಯಕರ್ತರನ್ನು ರೂಪಿಸುವ ವಿಶಿಷ್ಟ ಪರಂಪರೆಯನ್ನು ಹೊಂದಿದೆ ಎಂದು ಕೇಂದ್ರದ ಮಾಜಿ ಸಚಿವ ಭಗವಂತ್ ಖೂಬಾ ಹೇಳಿದರು.

**<><*<><>*><>**

<u>ಇನ್ನು ಹವಾವರ್ತಮಾನ,</u>

ರಾಜ್ಯದ ಕರಾವಳಿ, ದಕ್ಷಿಣ ಒಳನಾಡಿನ ಕೆಲವೆಡೆ ಉತ್ತರ ಒಳನಾಡಿನ ಒಂದೆರಡು ಕಡೆ ಮಳೆಯಾಗಿದೆ. ತಿಪಟೂರಿನಲ್ಲಿ ಅತಿಹೆಚ್ಚು ೫ ಸೆಂಟಿ ಮೀಟರ್ ಮಳೆಯಾಗಿದೆ. ಉಳಿದಂತೆ ಮಂಗಳೂರು ವಿಮಾನ ನಿಲ್ದಾಣ, ಬೆಂಗಳೂರು ನಗರ ವೀಕ್ಷಣಾಲಯ ತಲಾ ೫, ನಾಗಮಂಗಲ ೪, ಕಳಸ, ಮದ್ದೂರು, ಕೃಷ್ಣರಾಜ ಸಾಗರ, ಮೈಸೂರು ಪಿಟಿಒದಲ್ಲಿ ತಲಾ ೩ ಸೆಂಟಿ ಮೀಟರ್ ಮಳೆಯಾಗಿದೆ. ಬೀದರ್ ನಲ್ಲಿ ಗರಿಷ್ಠ ೪೦.೮ ಡಿಗ್ರಿ ಸೆಲ್ಸಿಯಸ್ ತಾಪಮಾನ ದಾಖಲಾಗಿದೆ. ಮುಂದಿನ ೨೪ ಗಂಟೆಗಳಲ್ಲಿ ಕರಾವಳಿಯ ಕೆಲವೆಡೆ ಉತ್ತರ ಒಳನಾಡು ಮತ್ತು ದಕ್ಷಿಣ ಒಳನಾಡಿನ ಒಂದೆರಡು ಕಡೆಗಳಲ್ಲಿ ಮಳೆಯಾಗಲಿದೆ. ಬೆಂಗಳೂರು ಸುತ್ತಮುತ್ತ ಭಾಗಶಃ ಮೋಡಕವಿದ ವಾತಾವರಣ. ಕೆಲವೆಡೆ ಮಳೆಯಾಗುವ ಸಾಧ್ಯತೆಯಿದೆ. ಗರಿಷ್ಠ ೩೩, ಕನಿಷ್ಠ ೨೦ ಡಿಗ್ರಿ ಸೆಲ್ಸಿಯಸ್ ತಾಪಮಾನ ಸಂಭವ.

**<>><>< ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು ><><<>**